<u>**ಕರ್ನಾಟಕ ವಿಧಾನ ಪರಿಷತ್ತು**</u>

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಎಂ.ಕೆ. ಪ್ರಾಣೇಶ್ ಇವರು ಚಿಕ್ಕಮಗಳೂರು ಜಿಲ್ಲೆಯ ಎನ್.ಆರ್. ಪುರ ಹಾಗೂ ಕೊಪ್ಪ ತಾಲ್ಲೂಕಿನ ಸರ್ಕಾರಿ ಆಸ್ಪತ್ರೆಗಳಲ್ಲಿ ಡಯಾಲಿಸಿಸ್ ಯಂತ್ರ ಹಾಳಾಗಿರುವುದರಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವ ಬಗ್ಗೆ ನಿಯಮ-72ರ ಅಡಿಯಲ್ಲಿ ಪ್ರಸ್ತಾಪಿಸಿರುವ ಸೂಚನೆಗೆ ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರ ಉತ್ತರ:-**

*****

ಪ್ರಧಾನ ಮಂತ್ರಿ ರಾಷ್ಟ್ರೀಯ ಡಯಾಲಿಸಿಸ್ ಕಾರ್ಯಕ್ರಮದ ಮಾರ್ಗಸೂಚಿಯ ಪ್ರಕಾರ ಪ್ರತಿ ಜಿಲ್ಲಾ ಆಸ್ಪತ್ರೆಯಲ್ಲಿ 10 ಡಯಾಲಿಸಿಸ್ ಯಂತ್ರಗಳು ಹಾಗೂ ಪ್ರತಿ ತಾಲ್ಲೂಕು ಆಸ್ಪತ್ರೆಯಲ್ಲಿ 02 ಡಯಾಲಿಸಿಸ್ ಯಂತ್ರಗಳನ್ನು ಅಳವಡಿಸಲು ಅವಕಾಶವಿರುತ್ತದೆ.

ಎನ್.ಆರ್.ಪುರ ಸಾರ್ವಜನಿಕ ಆಸ್ಪತ್ರೆಯಲ್ಲಿ ಪ್ರಸ್ತುತ 02 ಡಯಾಲಿಸಸ್ ಯಂತ್ರಗಳನ್ನು ಒದಗಿಸಲಾಗಿದ್ದು, 10 ರೋಗಿಗಳಿಗೆ ಡಯಾಲಿಸಸ್ ಸೌಲಭ್ಯವನ್ನು ಒದಗಿಸುವ ಸಾಮರ್ಥ್ಯವನ್ನು ಹೊಂದಿದೆ. ಹಾಲಿ 10 ರೋಗಿಗಳು ಮಾತ್ರ ಡಯಾಲಿಸಸ್ ಸೇವೆಯನ್ನು ಪಡೆಯುತ್ತಿದ್ದಾರೆ ಹಾಗೂ ಕೊಪ್ಪ ಸಾರ್ವಜನಿಕ ಆಸ್ಪತ್ರೆಯಲ್ಲಿ ಪ್ರಸ್ತುತ 01 ಡಯಾಲಿಸಸ್ ಯಂತ್ರವನ್ನು ಒದಗಿಸಲಾಗಿದ್ದು, 11 ರೋಗಿಗಳಿಗೆ ಡಯಾಲಿಸಸ್ ಸೌಲಭ್ಯವನ್ನು ಒದಗಿಸುವ ಸಾಮರ್ಥ್ಯವನ್ನು ಹೊಂದಿದೆ. ಹಾಲಿ 11 ರೋಗಿಗಳು ಮಾತ್ರ ಡಯಾಲಿಸಿಸ್ ಸೇವೆಯನ್ನು ಪಡೆಯುತ್ತಿದ್ದಾರೆ. ಈ ಆಸ್ಪತ್ರೆಗೆ ಮತ್ತೊಂದು ಹೊಸ ಡಯಾಲಿಸಿಸ್ ಯಂತ್ರವನ್ನು ಸದ್ಯದಲ್ಲೇ ಒದಗಿಸಲು ಕ್ರಮವಹಿಸಲಾಗುವುದು.

**ಕಡತ ಸಂಖ್ಯೆ: ನಿಯಮ-72/2022**

**(ಡಾ.ಕೆ ಸುಧಾಕರ್)**
ಆರೋಗ್ಯ ಮತ್ತು ಕುಟುಂಬ ಕಲ್ಯಾಣ
ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು